**Akashvani : Bangalore**
**National Bulletin In Kannada**
**25.08.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**25.08.2024 / 7.35 am**

<><*<><>*><>

<u>ಮುಖ್ಯಾಂಶಗಳು</u>

<><*<><>*><>

೧. ೧೧೩ನೇ ಆವೃತ್ತಿಯ ಮನ್ ಕಿ ಬಾತ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು

೨. ಏಕೀಕೃತ ಪಿಂಚಣಿ ಯೋಜನೆಗೆ ಸಚಿವ ಸಂಪುಟ ಅನುಮೋದನೆ

೩. ನಾಲ್ಕು ದಿನಗಳ ಪ್ರವಾಸಕ್ಕಾಗಿ ಬ್ರೆಜಿಲ್ ವಿದೇಶಾಂಗ ಸಚಿವ ಮೌರೊ ವಿಯೆರಾ ಇಂದು ಭಾರತಕ್ಕೆ ಆಗಮನ

೪. ನೇಪಾಳ ಬಸ್ ಅಪಘಾತ; ಮೃತಪಟ್ಟವರ ಸಂಬಂಧಿಕರಿಗೆ ಪಾರ್ಥೀವ ಶರೀರ ಹಸ್ತಾಂತರ-ಪ್ರಧಾನಿಯವರಿಂದ ಪರಿಹಾರ ಘೋಷಣೆ

<><*<><>*><>

'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ಇಂದು ಬೆಳಗ್ಗೆ ೧೧ ಗಂಟೆಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನ ಎಲ್ಲ ಜಾಲಗಳಲ್ಲಿ ಪ್ರಸಾರವಾಗಲಿದೆ. ಅಲ್ಲದೇ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಒ ಮತ್ತು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನಲ್‌ಗಳಲ್ಲೂ ನೇರ ಪ್ರಸಾರವಾಗಲಿದೆ. 'ಮನ್ ಕಿ ಬಾತ್' ಹಿಂದಿ ಅವತರಣಿಕೆಯ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಸರ್ಕಾರಿ ನೌಕರರಿಗೆ ಖಚಿತವಾದ ಪಿಂಚಣಿಯನ್ನು ಒದಗಿಸುವ 'ಏಕೀಕೃತ ಪಿಂಚಣಿ ಯೋಜನೆಗೆ' ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ನವದೆಹಲಿಯಲ್ಲಿ ನಿನ್ನೆ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಕನಿಷ್ಠ ೨೫ ವರ್ಷಗಳ ಸೇವೆ ಸಲ್ಲಿಸಿರುವವರ ನಿವೃತ್ತಿಗೆ ಮುನ್ನ ಹನ್ನೆರಡು ತಿಂಗಳುಗಳಲ್ಲಿ ಪಡೆದ ಸರಾಸರಿ ಮೂಲ ವೇತನದ ೫೦ ಪ್ರತಿಶತವನ್ನು ಈ ಯೋಜನೆ ಖಚಿತಪಡಿಸುತ್ತದೆ ಎಂದು ಹೇಳಿದರು. ಈ ಯೋಜನೆಯಡಿ ನೌಕರನ ಮರಣದ ನಂತರ ಕುಟುಂಬಕ್ಕೆ ೬೦ ಪ್ರತಿಶತ ಪಿಂಚಣಿ ದೊರೆಯಲಿದ್ದು, ಕನಿಷ್ಠ ೧೦ ವರ್ಷಗಳ ಸೇವೆ ಸಲ್ಲಿಸಿರುವವರಿಗೆ ನಿವೃತ್ತಿಯ ನಂತರ ತಿಂಗಳಿಗೆ ಕನಿಷ್ಠ ೧೦ ಸಾವಿರ ರೂಪಾಯಿಗಳ ಖಚಿತವಾದ ಕನಿಷ್ಠ ಪಿಂಚಣಿ ದೊರೆಯಲಿದೆ. ಸೇವಾ ಉದ್ಯೋಗಿಗಳಿಗೆ ಸಂಬಂಧಿಸಿದಂತೆ ಕೈಗಾರಿಕಾ ಕಾರ್ಮಿಕರಿಗೆ ಅಖಿಲ ಭಾರತ ಗ್ರಾಹಕ ಬೆಲೆ ಸೂಚ್ಯಂಕವನ್ನು ಆಧರಿಸಿ ಡಿಯರ್ನೆಸ್ ರಿಲೀಫ್ ಇರುತ್ತದೆ. ೨೦೨೫ ಏಪ್ರಿಲ್ ಒಂದರಿಂದ ಜಾರಿಗೆ ಬರಲಿರುವ ಈ ಯೋಜನೆಯಿಂದ ಸುಮಾರು ೨೩ ಲಕ್ಷ ಕೇಂದ್ರ ಸರ್ಕಾರಿ ನೌಕರರು ಪ್ರಯೋಜನ ಪಡೆಯಲಿದ್ದಾರೆ ಎಂದು ಸಚಿವರು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಹೆಚ್ಚಿನ ಕಾರ್ಯಕ್ಷಮತೆಯ ಜೈವಿಕ ಉತ್ಪಾದನೆಯನ್ನು ಉತ್ತೇಜಿಸಲು ಆರ್ಥಿಕತೆ, ಪರಿಸರ ಮತ್ತು ಉದ್ಯೋಗಕ್ಕಾಗಿ ಬಯೋ ಇ೩-ಬಯೋಟೆಕ್ನಾಲಜಿ ನೀತಿಗೆ ಅನುಮೋದನೆ ನೀಡಲಾಯಿತು ಎಂದು ಸಚಿವರು ತಿಳಿಸಿದರು. ವಿಷಯಾಧಾರಿತ ವಲಯಗಳಾದ್ಯಂತ ಸಂಶೋಧನೆ, ಅಭಿವೃದ್ಧಿ ಮತ್ತು ಉದ್ಯಮಶೀಲತೆಗೆ ನಾವೀನ್ಯತೆಯ ಸ್ಪರ್ಶ ನೀಡುವುದು ಈ ನೀತಿಯ ಉದ್ದೇಶವಾಗಿದೆ ಎಂದು ತಿಳಿಸಿದರು. ಇದೇ ವೇಳೆ ೧೦ ಸಾವಿರದ ೫೭೯ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮೂರು ಯೋಜನೆಗಳನ್ನು ವಿಲೀನಗೊಳಿಸಿ ವಿಜ್ಞಾನ ಧಾರಾ ಎಂಬ ಏಕೀಕೃತ ಕೇಂದ್ರ ವಲಯದ ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ. ಈ ಯೋಜನೆಯು ವಿಜ್ಞಾನ ಮತ್ತು ತಂತ್ರಜ್ಞಾನ, ಸಾಂಸ್ಥಿಕ ಮತ್ತು ಮಾನವ ಸಾಮರ್ಥ್ಯ ನಿರ್ಮಾಣ; ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ಹಾಗೂ ತಂತ್ರಜ್ಞಾನ ಅಭಿವೃದ್ಧಿ ಮತ್ತು ನಿಯೋಜನೆಯನ್ನು ಒಳಗೊಂಡಿದೆ.

<><*<><>*><>

ರಾಷ್ಟ್ರದ ಪ್ರಗತಿಯಲ್ಲಿ ಸರ್ಕಾರಿ ನೌಕರರು ನೀಡಿರುವ ಕೊಡುಗೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಏಕೀಕೃತ ಪಿಂಚಣಿ ಯೋಜನೆ ಕುರಿತು ಸಂಪುಟ ಸಭೆಯ ಅನುಮೋದನೆ ನಂತರ, ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ಈ ಯೋಜನೆಯು ಸರ್ಕಾರಿ ನೌಕರರಿಗೆ ಘನತೆ ಮತ್ತು ಆರ್ಥಿಕ ಭದ್ರತೆಯನ್ನು ಖಚಿತಪಡಿಸಲಿದೆ. ಈ ಯೋಜನೆಯು ಅವರ ಯೋಗಕ್ಷೇಮ

ಮತ್ತು ಸುರಕ್ಷಿತ ಭವಿಷ್ಯಕ್ಕಾಗಿ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ವಿಜ್ಞಾನ ಧಾರಾ ಕುರಿತ ಸಚಿವ ಸಂಪುಟದ ನಿರ್ಧಾರವನ್ನು ಎತ್ತಿ ಹಿಡಿದ ಪ್ರಧಾನಿ, ಇದು ಯುವಕರಲ್ಲಿ ನಾವೀನ್ಯತೆ ಮತ್ತು ವೈಜ್ಞಾನಿಕ ಸಂಶೋಧನೆಗಳನ್ನು ಉತ್ತೇಜಿಸುತ್ತದೆ. ಹಾಗೆಯೆ ಬಯೋ-ಇ೩ ನೀತಿ, ಉನ್ನತ-ಕಾರ್ಯಕ್ಷಮತೆಯ ಜೈವಿಕ ಉತ್ಪಾದನೆಯನ್ನು ಉತ್ತೇಜಿಸುವುದರ ಜೊತೆಗೆ ಪರಿಸರ ಸಂರಕ್ಷಣೆ ಮತ್ತು ಉದ್ಯೋಗ ಸೃಷ್ಟಿಗೆ ಸಹ ಪ್ರಯೋಜನಕಾರಿಯಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><*<><>*><>

ಬ್ರೆಜಿಲ್‌ನ ವಿದೇಶಾಂಗ ವ್ಯವಹಾರಗಳ ಸಚಿವ ಮೌರೊ ವಿಯೆರಾ, ನಾಲ್ಕು ದಿನಗಳ ಭಾರತ ಪ್ರವಾಸಕ್ಕಾಗಿ ಇಂದು ನವದೆಹಲಿಗೆ ಆಗಮಿಸಲಿದ್ದಾರೆ.  ಇದೇ ೨೭ ರಂದು ನಡೆಯಲಿರುವ ೯ನೇ ಭಾರತ-ಬ್ರೆಜಿಲ್ ಜಂಟಿ ಆಯೋಗದ ಸಭೆಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮತ್ತು ವಿಯೇರಾ ಸಹ-ಅಧ್ಯಕ್ಷರಾಗಿರಲಿದ್ದಾರೆ.  ಈ ವರ್ಷ ಬ್ರೆಜಿಲ್ ಜಿ-೨೦ ಅಧ್ಯಕ್ಷತೆ ವಹಿಸಿರುವ ಸಂದರ್ಭದಲ್ಲಿ ಉಭಯ ದೇಶಗಳು ಕಳೆದ ವರ್ಷ ಭಾರತ ಅಧ್ಯಕ್ಷತೆಯಲ್ಲಿ ಕೈಗೊಂಡ ಪ್ರಮುಖ ನಿರ್ಧಾರ ಹಾಗೂ ಫಲಿತಾಂಶಗಳನ್ನು ಹೇಗೆ ಮುನ್ನಡೆಸಬಹುದು ಎಂಬುದರ ಕುರಿತು ಸಚಿವರು ಚರ್ಚಿಸಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ವಿದೇಶಾಂಗ ಸಚಿವ ವಿಯೆರಾ ಅವರ ಈ ಭೇಟಿಯು ೨೦೦೬ ರಲ್ಲಿ ಆರಂಭವಾದ ಬ್ರೆಜಿಲ್-ಭಾರತದ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಬಹುಪಕ್ಷೀಯ ಕ್ಷೇತ್ರಗಳಲ್ಲಿ ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸಲು ಅವಕಾಶ ಒದಗಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಹಾರಾಷ್ಟ್ರದ ಜಲಗಾಂವ್ ಮತ್ತು ರಾಜಸ್ಥಾನದ ಜೋಧ್‌ಪುರಕ್ಕೆ ಭೇಟಿ ನೀಡಲಿದ್ದಾರೆ.    ಲಕ್ಷಾದಿಪತಿ ದೀದಿ ಸಮ್ಮೇಳನದಲ್ಲಿ ಭಾಗವಹಿಸಲು ಜಲಗಾಂವ್‌ಗೆ ಭೇಟಿ ನೀಡಲಿರುವ ಅವರು, ೧೧ ಲಕ್ಷ ಹೊಸ ಲಕ್ಷಾದಿಪತಿ ದೀದಿಗಳಿಗೆ ಪ್ರಮಾಣಪತ್ರ ನೀಡಿ, ಗೌರವಿಸಲಿದ್ದಾರೆ. ಇದೇ ವೇಳೆ ಪ್ರಧಾನಿಯ ೨ ಸಾವಿರದ ೫೦೦ ಕೋಟಿ ರೂಪಾಯಿ ನಿಧಿಯನ್ನು ಬಿಡುಗಡೆ ಮಾಡಲಿದ್ದು, ಇದರಿಂದ ಸುಮಾರು ೪೮ ಲಕ್ಷ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಪ್ರಯೋಜನವಾಗಲಿದೆ.  ಬಳಿಕ ಅವರು, ೫ ಸಾವಿರ ಕೋಟಿ ರೂಪಾಯಿಗಳ ಬ್ಯಾಂಕ್ ಸಾಲ ವಿತರಿಸಲಿದ್ದು, ಇದರಿಂದ ಸುಮಾರು ೨೬ ಲಕ್ಷ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಪ್ರಯೋಜನವಾಗಲಿದೆ. ಲಕ್ಷಾದಿಪತಿ ಯೋಜನೆ ಆರಂಭವಾದಾಗಿನಿಂದ ಇಲ್ಲಿಯವರೆಗೆ ಒಂದು ಕೋಟಿ ಮಹಿಳೆಯರನ್ನು ಲಕ್ಷಾದಿಪತಿ ದೀದಿಗಳನ್ನಾಗಿ ಮಾಡಲಾಗಿದೆ. ಮೂರು ಕೋಟಿ ಲಕ್ಷಾದಿಪತಿ

ದೀದಿಗಳನ್ನಾಗಿಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ. ಈ ಕಾರ್ಯಕ್ರಮದ ನಂತರ ಪ್ರಧಾನಿ ನರೇಂದ್ರ ಮೋದಿ, ರಾಜಸ್ಥಾನದ ಜೋಧಪುರಕ್ಕೆ ಭೇಟಿ ನೀಡಲಿದ್ದು, ರಾಜಸ್ಥಾನ ಹೈಕೋರ್ಟ್‌ನ ಅಮೃತ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಇದೇ ವೇಳೆ ಅವರು ರಾಜಸ್ಥಾನ ಹೈಕೋರ್ಟ್ ವಸ್ತುಸಂಗ್ರಹಾಲಯವನ್ನು ಉದ್ಘಾಟಿಸಲಿದ್ದಾರೆ.

<><*<><>*><>

ನೇಪಾಳದಲ್ಲಿ ತನಾಹುನ್ ಜಿಲ್ಲೆಯಲ್ಲಿ ನಿನ್ನೆ ಸಂಭವಿಸಿದ ಬಸ್ ಅಪಘಾತದಲ್ಲಿ ಮೃತಪಟ್ಟ ೨೫ ಪ್ರಯಾಣಿಕರ ಪಾರ್ಥೀವ ಶರೀರಗಳನ್ನು ಭಾರತೀಯ ವಾಯುಪಡೆಯ ವಿಶೇಷ ವಿಮಾನದಲ್ಲಿ ಜಳಗಾಂವ್‌ಗೆ ನಿನ್ನೆ ಸಂಜೆ ತರಲಾಯಿತು. ನಂತರ ಆಂಬುಲೆನ್ಸ್‌ಗಳ ಮೂಲಕ ಮೃತ ದೇಹಗಳನ್ನು ಸ್ವಗ್ರಾಮಗಳಿಗೆ ಸಾಗಿಸಿ ಮೃತರ ಕುಟುಂಬಗಳಿಗೆ ಹಸ್ತಾಂತರಿಸಲಾಯಿತು.  ಅಪಘಾತದಲ್ಲಿ ಗಾಯಗೊಂಡವರಿಗೆ ನೇಪಾಳದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಒಬ್ಬ ಸಂತ್ರಸ್ಥ ಗಂಭೀರ ಸ್ಥಿತಿಯಲ್ಲಿದ್ದು, ಪ್ರಸ್ತುತ ತೀವ್ರ ನಿಗಾಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮಹಾರಾಷ್ಟ್ರ ಸಚಿವ ಗುಲಾಬ್‌ರಾವ್ ಪಾಟೀಲ್ ಹೇಳಿದ್ದಾರೆ. ಅಪಘಾತದಲ್ಲಿ ಮೃತಪಟ್ಟ ಹಾಗೂ ಗಾಯಗೊಂಡ ಭಾರತೀಯರಿಗೆ ಪ್ರಧಾನಿ ನರೇಂದ್ರ ಮೋದಿ ಅವರು, ಪರಿಹಾರ ಘೋಷಿಸಿದ್ದಾರೆ. ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಕುಟುಂಬಗಳಿಗೆ ತಲಾ ಎರಡು ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿಗಳ ಪರಿಹಾರ ನೀಡಲಾಗುತ್ತದೆ.

<><*<><>*><>

ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಸೆಕ್ಷನ್ ೧೬೩ ಅನ್ನು ಕೋಲ್ಕತ್ತಾ ಪೋಲೀಸ್ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ, ಜಾರಿಗೊಳಿಸಲಾಗಿದೆ. ಇಂದಿನಿಂದ ಇದೇ ೩೧ ರವರೆಗೆ ಅಥವಾ ಮುಂದಿನ ಸೂಚನೆ ಬರುವವರೆಗೆ ಐದಕ್ಕಿಂತ ಹೆಚ್ಚು ಜನರು ಸೇರುವುದನ್ನು ನಿಷೇಧಿಸಲಾಗಿದೆ. ಕೇಂದ್ರ ತನಿಖಾ ಸಂಸ್ಥೆ-ಸಿಬಿಐ ನಿನ್ನೆ ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್‌ರ ಮೇಲೆ ಸುಳ್ಳು ಪತ್ತೆ ಹಚ್ಚುವ ಪಾಲಿಗ್ರಾಫ್ ಪರೀಕ್ಷೆಯನ್ನು ನಡೆಸಿತು. ಏತನ್ಮಧ್ಯೆ, ಆರ್.ಜಿ.ಕಾರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಡಾ.ಸಂದೀಪ್ ಘೋಷ್ ವಿರುದ್ಧ ಸಿಬಿಐ ಹಣಕಾಸು ಅವ್ಯವಹಾರ ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಿದೆ.  ಆರ್ ಜಿ ಕಾರ್ ಸಂತ್ರಸ್ತರಿಗೆ ನ್ಯಾಯ ಕೋರಿ ಪಶ್ಚಿಮ ಬಂಗಾಳದ ವಿವಿಧೆಡೆ ಪ್ರತಿಭಟನೆಗಳು ನಡೆಯುತ್ತಿವೆ. ನಿನ್ನೆ ವಿವಿಧ ಸಂಘ ಹಾಗೂ ಒಕ್ಕೂಟಗಳು ಕೋಲ್ಕತ್ತಾ ಪೊಲೀಸ್

ಪ್ರಧಾನ ಕಚೇರಿಯಾದ ಲಾಲ್ ಬಜಾರ್ ಕಡೆಗೆ ರ್‍ಯಾಲಿ ನಡೆಸಿದರು. ಸಂಸ್ಥೆಯ ಕಿರಿಯ ವೈದ್ಯರು ಸೇವೆಗೆ ಮರಳುವ ಕುರಿತು ಚರ್ಚಿಸಲು ಆರ್.ಜಿ.ಕಾರ್ ನಲ್ಲಿ ಪ್ರಾಂಶುಪಾಲರು ಹಾಗೂ ವೈದ್ಯಕೀಯ ಶಿಕ್ಷಣ ನಿರ್ದೇಶಕರ ಸಭೆ ನಡೆಸಲಾಯಿತಾದರೂ, ಯಾವುದೇ ತೀರ್ಮಾನಕ್ಕೆ ಬರಲು ಸಾಧ್ಯವಾಗಲಿಲ್ಲ.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ, ಛತ್ತೀಸ್‌ಗಡದ ರಾಯ್‌ಪುರದಲ್ಲಿಂದು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ-ಎನ್‌ಸಿಬಿ ಕಚೇರಿಯನ್ನು ಉದ್ಘಾಟಿಸಿ, ಪರಿಶೀಲನಾ ಸಭೆ ನಡೆಸಲಿದ್ದಾರೆ. ನಂತರ ಛತ್ತೀಸ್‌ಗಢದಲ್ಲಿ ಸಹಕಾರಿ ಕ್ಷೇತ್ರದ ವಿಸ್ತರಣೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ನಿನ್ನೆ ಅವರು, ಛತ್ತೀಸ್‌ಗಢದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆ ಕುರಿತು ಸರಣಿ ಸಭೆಗಳನ್ನು ನಡೆಸಿ ಮಾತನಾಡಿದ ಅವರು, ಛತ್ತೀಸಗಢವನ್ನು ನಕ್ಸಲ್ ಮುಕ್ತ ರಾಜ್ಯವನ್ನಾಗಿ ಮಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಲವು ರೀತಿಯ ಕಾರ್ಯಯೋಜನೆಗಳನ್ನು ರೂಪಿಸಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಅವರು, ಛತ್ತೀಸ್‌ಗಢ ಮತ್ತು ನೆರೆಯ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಪೊಲೀಸ್ ಮಹಾನಿರ್ದೇಶಕರ ಅಂತರ್‌ರಾಜ್ಯ ಸಮನ್ವಯ ಸಭೆಯಲ್ಲಿ ಪಾಲ್ಗೊಂಡರು.

<><*<><>*><>

ಕೌಶಲ್ಯಾಭಿವೃದ್ಧಿ ಮತ್ತು ವಾಣಿಜ್ಯೋದ್ಯಮ ಇಲಾಖೆ ಮೂಲಕ ಮಕ್ಕಳ ಭವಿಷ್ಯಕ್ಕಾಗಿ ಅತ್ಯುತ್ತಮ ಕೌಶಲ್ಯವನ್ನು ಒದಗಿಸಲು ಸರ್ಕಾರ ಕೆಲಸ ಮಾಡುತ್ತಿದೆ ಎಂದು ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ವಾಣಿಜ್ಯೋದ್ಯಮ ರಾಜ್ಯ ಸಚಿವ ಜಯಂತ್ ಚೌಧರಿ ಹೇಳಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>